# GURUPOORNIMA CELEBRATION @SRS DATE: 03-07-2023

ಶಾಲಾ–ಕಾಲೇಜುಗಳಲ್ಲಿ ಉಪನ್ಯಾಸ, ಸಾಧಕರ ಸನ್ಮಾನ; ಮಕ್ಕಳಿಂದ ಪಾಲಕರ ಪಾದಪೂಜೆ

## ಜಿಲ್ಲೆಯಾದ್ಯಂತ ಗುರುಪೂರ್ಣಿಮೆ ಸಂಭ್ರಮ

ಪ್ರಜಾವಾಣಿ ವಾರ್ತೆ

ಚಿತ್ರದುರ್ಗ: ಜಿಲ್ಲೆಯಾದ್ಯಂತ ಸೋಮವಾರ ಗುರುಪೂರ್ಣಿಮೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಸಂಘ–ಸಂಸ್ಥೆ ಹಾಗೂ ಶಾಲಾ-ಕಾಲೇಜುಗಳಲ್ಲಿ ಉಪನ್ಯಾಸ, ಸಾಧಕರನ್ನು ಸನ್ಮಾನಿಸುವ ಮೂಲಕ ಗುರುವಂದನೆ ಸಲ್ಲಿಸಲಾಯಿತು.

ದೇವಸ್ಥಾನಗಳಲ್ಲಿ ದೇವರಿಗೆ ವಿಶೇಷ ಅಲಂಕಾರದ ಮಾಡಿ ಪೂಜೆ ಸಲ್ಲಿಸಲಾಯಿತು.

ಸಾಯಿ ಸಂಕಲ್ಪ ಸೇವಾ ಸಮಿತಿಯಿಂದ ನಗರದ ಬಾಲಾಲಯದಲ್ಲಿ ಗುರುಪೂಜಾ ಕಾರ್ಯ ನಡೆಯಿತು. ಬೆಳಿಗ್ಗೆ 9ರಿಂದ ರಾತ್ರಿ 7ರವರೆಗೂ ಪೂಜಾ ಕಾರ್ಯಗಳು ಸಾಗಿದವು. ರಾಘವೇಂದ್ರ ಶರ್ಮಾ ನೇತೃತ್ವದಲ್ಲಿ ಕ್ಷೀರಾಭಿಷೇಕ, ಗುರುಪೂಜೆ ನೆರವೇರಿಸಲಾಯಿತು. ಬಳಿಕ ಸಾಯಿಬಾಬಾ ಮೂರ್ತಿಗೆ ಪುಷ್ಪಾರ್ಚನೆ, ಭಜನೆ, ಸತ್ಸಂಗ, ಮಹಾ ಮಂಗಳಾರತಿ ಬಳಿಕ ಪ್ರಸಾದ ವಿನಿಯೋಗಿಸಲಾಯಿತು.

ನಗರದ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಜಿಲ್ಲಾ ಯೋಗ ಸಂಸ್ಥೆ, ರೋಟರಿ ಕ್ಲಬ್ ಚಿತ್ರದುರ್ಗ ಪೋರ್ಟ್ ಹಾಗೂ ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಪೋರ್ಟ್ ಸಹಯೋಗದಲ್ಲಿ ಗುರುವಂದನಾ ಕಾರ್ಯಕ್ರಮ ನಡೆಯಿತು.

'ಗುರು ಶಿಷ್ಯರ ನಡುವಿನ ಬಾಂಧವ್ಯ ಒಂದು ರೀತಿಯಲ್ಲಿ ತಂದೆ ಮಕ್ಕಳ ಸಂಬಂಧವಿದ್ದಂತೆ. ಅಲ್ಲಿ ಪ್ರೀತಿಸುವ ಮತ್ತು ದಂಡಿಸುವ ಕ್ರಮವಿದ್ದಾಗ ಒಳ್ಳೆಯ ಶಿಷ್ಯನಾಗಲು ಸಾಧ್ಯ' ಎಂದು ಸನ್ಮಾನ ಸ್ವೀಕರಿಸಿದ ಯೋಗಾಚಾರ್ಯ ಎಲ್.ಎಸ್. ಚಿನ್ಮಯಾನಂದ ಅಭಿಪ್ರಾಯಪಟ್ಟರು.



ಚಿತ್ರದುರ್ಗದ ಎಸ್‌ಆರ್‌ಎಸ್ ಹೆರಿಟೇಜ್ ಶಾಲೆಯ 'ಅನಂತಕೃಷ್ಣ' ಬೃಹತ್ ಸಭಾಂಗಣದಲ್ಲಿ ಸೋಮವಾರ ನಡೆದ ಗುರುಪೂರ್ಣಿಮೆ ಸಂಭ್ರಮ.

> ಕತ್ತಲ ಬದುಕಿಗೆ ಬೆಳಕಿನ ಹಾದಿ ತೋರುವವರೇ ಗುರು. ಅಂತಹ ಗುರುಗಳಲ್ಲಿ ಬುದ್ಧ ಮಹಾಶಯರು ಅತ್ಯಂತ ಶ್ರೇಷ್ಠರು. ಇಂದಿನ ತಲ್ಲಣ, ಆತಂಕದ ಬದುಕಿಗೆ ಶಾಂತಿ, ನೆಮ್ಮದಿಯ ನೆಲೆಯು ಬುದ್ಧನ ತತ್ವಗಳಲ್ಲಿ ಇದೆ.
>
> **ನೆಲ್ಲಿಕಟ್ಟೆ ಎಸ್.ಸಿದ್ದೇಶ್**, ಸಾಹಿತಿ

ಯೋಗ ಶಿಕ್ಷಕರಾದ ಎಸ್.ಜಿ.ರಂಗನಾಥ್, ಎಂ.ಪಿ.ಮುರುಳಿ, ವೆಂಕಟೇಶ್, ರಾಜಣ್ಣ ಹಾಗೂ ತನುಜಾ ಅವರನ್ನು ಸನ್ಮಾನಿಸಲಾಯಿತು.

ರೋಟರಿ ಕ್ಲಬ್ ಚಿತ್ರದುರ್ಗ ಪೋರ್ಟ್ ಅಧ್ಯಕ್ಷ ಗಿರೀಶ್, ಇನ್ನರ್ ವೀಲ್ ಕ್ಲಬ್ ಚಿತ್ರದುರ್ಗ ಪೋರ್ಟ್ ಅಧ್ಯಕ್ಷೆ ಸುಧಾ ಗೋವಿಂದರಾಜು, ಕಾರ್ಯದರ್ಶಿ ನಂದಿನಿ ರಾಘವೇಂದ್ರ, ಜಿಲ್ಲಾ ಯೋಗ ಸಂಸ್ಥೆ ಅಧ್ಯಕ್ಷ ಎಸ್.ಜಿ.ರಂಗನಾಥ್ ಇದ್ದರು.

ಬಾಪೂಜಿ ಸಮೂಹ ಸಂಸ್ಥೆಯ ಬಾಪೂಜಿ ಪಬ್ಲಿಕ್ ಶಾಲೆಯಲ್ಲಿ ಶಾಲಾ ಮಕ್ಕಳು ಗುರುಪೂರ್ಣಿಮೆ ಆಚರಿಸಿದರು. ಸಂಸ್ಥೆ ಕಾರ್ಯದರ್ಶಿ ಕೆ.ಎಂ. ವೀರೇಶ್ ಮಾತನಾಡಿ, 'ಪ್ರತಿಯೊಬ್ಬರ ಜೀವನದಲ್ಲಿ ಗುರುಗಳು, ಪೋಷಕರು ಅತಿ ಮುಖ್ಯ ಪಾತ್ರವಹಿಸುತ್ತಾರೆ. ಅವರ ಅನುಗ್ರಹ ಇಲ್ಲದೆ ಏನನ್ನು ಸಾಧಿಸಲು ಸಾಧ್ಯವಿಲ್ಲ' ಎಂದರು.

ಭಾರತೀಯ ಯೋಗ ಶಿಕ್ಷಣ ಸಂಸ್ಥೆ ಸದಸ್ಯರು ನಗರದ ವೆಂಕಟರಮಣ ಸ್ವಾಮಿ ದೇವಸ್ಥಾನದ ಆವರಣದಲ್ಲಿ ಅಗ್ನಿಹೋತ್ರ ಹೋಮ ನಡೆಸಿದರು.

'ಅಜ್ಞಾನದ ಅಂಧಕಾರ ಅಳಿಸಿ ಬೆಳಕಿನೆಡೆಗೆ ನಡೆಸಿದ ಎಲ್ಲಾ ಗುರುಗಳನ್ನು ಸ್ಮರಿಸುವ ಸಲುವಾಗಿ ಇಂದಿಗೂ ಹಿಂದೂ ಧರ್ಮದಲ್ಲಿ ಗುರುಪೂರ್ಣಿಮೆಯನ್ನು ಹಬ್ಬದ ರೀತಿಯಲ್ಲಿ ಆಚರಿಸಲಾಗುತ್ತಿದೆ' ಎಂದು ಸಂಸ್ಥೆ ಅಧ್ಯಕ್ಷ ರವಿ ಕೆ.ಅಂಬೇಕರ್ ತಿಳಿಸಿದರು.

ಸಂಸ್ಥೆ ನಿರ್ದೇಶಕ ಎಂ.ಆರ್. ಮಂಜುನಾಥ್, ಸಾಧಕರಾದ ವನಜಾಕ್ಷಮ್ಮ, ಅನಸೂಯಮ್ಮ, ರೇಣುಕಾ, ತಿಪ್ಪಮ್ಮ, ಭಾಗ್ಯಮ್ಮ, ಅನಿತಾ, ನಿರ್ಮಲಾ, ಪಂಚಮಿ, ಕುಮುದಾ, ಶೈಲಜಾ ಇದ್ದರು.

ಜ್ಞಾನಭಾರತಿ ವಿದ್ಯಾಮಂದಿರದಲ್ಲಿ ಭಾರತ ಮಾತೆ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗುರುಪೂರ್ಣಿಮೆ ಆಚರಿಸಲಾಯಿತು.

'ಗುರು ಎಂದರೆ ಪರಿಪೂರ್ಣವಾದ ವ್ಯಕ್ತಿತ್ವ ನಿರ್ಮಾಣ ಮಾಡುವ ಶಕ್ತಿ. ಮಕ್ಕಳಿಗೆ ಬಾಲ್ಯದಲ್ಲೇ ಸಂಸ್ಕಾರ ಕಲಿಸಿದರೆ ಉತ್ತಮ ಪ್ರಜೆಗಳಾಗಿ ದೇಶ ಸೇವೆ ಮಾಡಲು ಮುಂದಾಗುತ್ತಾರೆ' ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಚಾರಕ ಶ್ರೀನಾಥ್ ಹೇಳಿದರು.

ಪ್ರಾಂಶುಪಾಲ ಬಿ.ಎಂ.ಪ್ರಜ್ವಲ್, ಶಾಲೆ ಆಡಳಿತಾಧಿಕಾರಿ ಹನುಮೇಶ್ ಪದಕಿ ಇದ್ದರು.



ಚಿತ್ರದುರ್ಗ ನಗರದ ನೀಲಕಂಠೇಶ್ವರ ಸಮುದಾಯ ಭವನದಲ್ಲಿ ಜಿಲ್ಲಾ ಯೋಗ ಸಂಸ್ಥೆ, ರೋಟರಿ ಕ್ಲಬ್ ಚಿತ್ರದುರ್ಗ ಪೋರ್ಟ್ ಹಾಗೂ ಇನ್ನರ್‌ವೀಲ್ ಕ್ಲಬ್ ಚಿತ್ರದುರ್ಗ ಪೋರ್ಟ್ ಸಹಯೋಗದಲ್ಲಿ ಆಯೋಜಿಸಿದ್ದ ಗುರುವಂದನಾ ಕಾರ್ಯಕ್ರಮದಲ್ಲಿ ಯೋಗ ಶಿಕ್ಷಕರನ್ನು ಸನ್ಮಾನಿಸಲಾಯಿತು



ಚಿತ್ರದುರ್ಗದ ಬಾಪೂಜಿ ಸಮೂಹ ಸಂಸ್ಥೆಯ ಬಾಪೂಜಿ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಗುರುಪೂರ್ಣಿಮೆ ಸಮಾರಂಭವನ್ನು ಸಂಸ್ಥೆ ಕಾರ್ಯದರ್ಶಿ ಕೆ.ಎಂ. ವೀರೇಶ್ ಉದ್ಘಾಟಿಸಿದರು